# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 317 (327)
ಸದಸ್ಯರ ಹೆಸರು : ಶ್ರೀ ಶರವಣ ಟಿ.ಎ.
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 21-12-2022
ಉತ್ತರಿಸುವ ಸಚಿವರು : ಲೋಕೋಪಯೋಗಿ

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಲೋಕೋಪಯೋಗಿ ಇಲಾಖೆ ವತಿಯಿಂದ ಬಜೆಟ್‌ನಲ್ಲಿ ಘೋಷಿಸಿದಂತೆ 750 ಕೋಟಿ ರೂಪಾಯಿ ವೆಚ್ಚದಲ್ಲಿ 100 ಡಾ.ಬಿ.ಆರ್. ಅಂಬೇಡ್ಕರ್ ವಿದ್ಯಾರ್ಥಿ ನಿಲಯ ಮತ್ತು 10 ಕ್ರೈಸ್ ವಸತಿ ಶಾಲೆಗಳ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆಯೇ; ನೀಡಿದ್ದಲ್ಲಿ, ವಿವರ ನೀಡುವುದು. | ಲೋಕೋಪಯೋಗಿ ಇಲಾಖೆ ವತಿಯಿಂದ ಬಜೆಟ್‌ನಲ್ಲಿ ಘೋಷಿಸಿದಂತೆ 750 ಕೋಟಿ ರೂಪಾಯಿ ವೆಚ್ಚದಲ್ಲಿ 100 ಡಾ.ಬಿ.ಆರ್. ಅಂಬೇಡ್ಕರ್ ವಿದ್ಯಾರ್ಥಿ ನಿಲಯ ಮತ್ತು 10 ಕ್ರೈಸ್ ವಸತಿ ಶಾಲೆಗಳ ನಿರ್ಮಾಣಕ್ಕೆ ಸಂಬಂಧಿಸಿದಂತೆ<br>92 ಹಾಸ್ಟಲ್ ಕಟ್ಟಡಗಳ ಕಾಮಗಾರಿಗಳನ್ನು ಕೈಗೊಳ್ಳಲು ತಾತ್ವಿಕ ಆಡಳಿತಾತ್ಮಕ ಅನುಮೋದನೆಯನ್ನು ಸರ್ಕಾರದ ಆದೇಶ ಸಂಖ್ಯೆ ಲೋಇ 14 ಆರ್‌ಡಿಎಫ್ (ಭಾಗ-1) 2022 ದಿನಾಂಕ 21-11-2022ರಂದು ಆದೇಶವನ್ನು ಹೊರಡಿಸಲಾಗಿದೆ.<br>ಹಾಗೂ 11 ವಸತಿ ಶಾಲೆಗಳ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳು ಸರ್ಕಾರದ ಆದೇಶ ಸಂಖ್ಯೆ ಲೋಇ 13 ಆರ್‌ಡಿಎಫ್ 2022 ದಿನಾಂಕ 04-05-2022ರಲ್ಲಿ ತಾತ್ವಿಕ ಆಡಳತಾತ್ಮಕ ಅನುಮೋದನೆ ನೀಡಲಾಗಿದೆ. |
| ಆ. | ಪ್ರಸಕ್ತ ಆರ್ಥಿಕ ವರ್ಷದಲ್ಲಿ ನವೆಂಬರ್ ಕೊನೆಯವರೆಗೆ ಎಷ್ಟು ಹಾಸ್ಟೆಲ್‌ಗಳು, ವಸತಿ ಶಾಲೆಗಳ ಕಾಮಗಾರಿಗಳು ಪೂರ್ಣಗೊಂಡಿವೆ; ಕಾಮಗಾರಿಗಳು ವಿಳಂಬವಾಗಿರುವುದಕ್ಕೆ ಕಾರಣಗಳೇನು: | ಪ್ರಸಕ್ತ ಆರ್ಥಿಕ ವರ್ಷದಲ್ಲಿ ನವೆಂಬರ್-22ರ ಅಂತ್ಯಕ್ಕೆ ಯಾವುದೇ ಹಾಸ್ಟೆಲ್‌ಗಳು, ವಸತಿ ಶಾಲೆಗಳ ಕಾಮಗಾರಿಗಳು ಪೂರ್ಣಗೊಂಡಿರುವುದಿಲ್ಲ.<br>92 ಹಾಸ್ಟಲ್ ಕಟ್ಟಡಗಳ ನಿರ್ಮಾಣವನ್ನು ಪ್ರತಿ ಹಾಸ್ಟಲ್ ಕಟ್ಟಡದಲ್ಲಿ 100 ವಿದ್ಯಾರ್ಥಿಗಳಿಗೆ ರೂ.6.50 ಕೋಟಿ ಮೊತ್ತದಲ್ಲಿ ನಿರ್ಮಿಸಲು ನಿರ್ಣಯಿಸಲಾಗಿದ್ದು, ವಿವರವಾದ ಯೋಜನಾ ವರದಿ ತಯಾರಿಕೆ ಪ್ರಗತಿಯಲ್ಲಿದೆ.<br>11 ವಸತಿ ಶಾಲೆಗಳನ್ನು ಪ್ರತಿ ವಸತಿ ಶಾಲೆಯನ್ನು ರೂ.18.00 ಕೋಟಿ ಮೊತ್ತದಲ್ಲಿ ನಿರ್ಮಿಸಲು ಯೋಜನಾ ವರದಿ ಸಿದ್ಧಪಡಿಸಿದ್ದು, ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮ ವಹಿಸಲಾಗಿದೆ. |
| ಇ. | ಪ್ರಸಕ್ತ ಆರ್ಥಿಕ ವರ್ಷದೊಳಗಾಗಿ ನಿಗದಿತ ಕಾಮಗಾರಿಗಳನ್ನು ಪೂರ್ಣಗೊಳಿಸಿ ಗುರಿ ಮುಟ್ಟಲು ಸಾಧ್ಯವೇ? | ಪ್ರಸಕ್ತ ಆರ್ಥಿಕ ವರ್ಷದೊಳಗಾಗಿ ಈ ಎಲ್ಲಾ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ಹಾಗೂ ಈ ಕಾಮಗಾರಿಗಳನ್ನು 11 ತಿಂಗಳ ಅವಧಿಯೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. |

ಸಂಖ್ಯೆ: ಲೋಇ 89 ಅರ್‌ಡಿಎಫ್ 2022

**(ಸಿ.ಸಿ.ಪಾಟೀಲ)**
ಲೋಕೋಪಯೋಗಿ ಸಚಿವರು